**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ರವರು ಮಂಡಿಸಿರುವ ನಿಯಮ 72 ರ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯತಿಯಲ್ಲಿ ಸುಮಾರು ತಿಂಗಳುಗಳಿಂದ ಖಾಯಂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಖಾಯಂ ಕಾರ್ಯದರ್ಶಿಗಳು ಇಲ್ಲದೇ ಇರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದಾಗಿ ಗ್ರಾಮ ಪಂಚಾಯತಿ ಸದಸ್ಯರುಗಳು ಪ್ರತಿಭಟನೆ ಮಾಡಿ ಇಲಾಖಾ ಮುಖ್ಯಸ್ಥರ ಗಮನಕ್ಕೆ ತಂದರೂ ಸಹ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಹಾಗೂ ಸದರಿ ಗ್ರಾಮ ಪಂಚಾಯತಿಗೆ ಖಾಯಂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಖಾಯಂ ಕಾರ್ಯದರ್ಶಿಗಳನ್ನು ನೇಮಿಸುವ ಬಗ್ಗೆ.**

---

**ಉತ್ತರ:** ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ:367:ಗ್ರಾಪಂಕಾ:2019 ದಿನಾಂಕ:22-07-2021 ರಲ್ಲಿ ಶ್ರೀ ಸಚಿನ್.ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಿದರಕೋಟೆ ಗ್ರಾಮ ಪಂಚಾಯತಿ ಮತ್ತು ಶ್ರೀ ಮಂಜುನಾಥ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗ್ಗಹಳ್ಳಿ ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು ಇವರುಗಳನ್ನು ಪರಸ್ಪರ ವರ್ಗಾವಣೆ ಮಾಡಿ ಆದೇಶಿಸಲಾಗಿರುತ್ತದೆ.

ಅದರಂತೆ, ಮಂಡ್ಯ ಜಿಲ್ಲಾ ಪಂಚಾಯಿತಿ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ : ಉಕಾ1:ಸಿ2:ಪಿಡಿಓ:ಸಿಆರ್-19:2021-22, ದಿನಾಂಕ:05-08-2021ರಲ್ಲಿ ಶ್ರೀ ಸಚಿನ್.ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರನ್ನು ತಗ್ಗಹಳ್ಳಿ ಗ್ರಾಮ ಪಂಚಾಯತಿಗೆ, ಹಾಗೂ ಶ್ರೀ ಮಂಜುನಾಥ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರನ್ನು ಬಿದರಕೋಟೆ ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು ಇಲ್ಲಿಗೆ ಪರಸ್ಪರ ವರ್ಗಾವಣೆ ಮಾಡಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ:486:ಜಿಪಿಎಸ್:2020, ದಿನಾಂಕ:10-07-2020 ರಲ್ಲಿ ತುಮಕೂರು ಜಿಲ್ಲೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ನಿಯೋಜನೆ ಮೇಲೆ ನೇಮಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ವಶಕ್ಕೆ ನೀಡಿ ಆದೇಶಿಸಲಾಗಿದ್ದು, ಮಂಡ್ಯ ಜಿಲ್ಲಾ ಪಂಚಾಯಿತಿ ಕಛೇರಿಯ ಆದೇಶ ಸಂಖ್ಯೆ: ಉಕಾ1:ಸಿ2:ಪಿಡಿಓ:ಸಿಆರ್-14:2020-01, ದಿನಾಂಕ:29-07-2020 ರಲ್ಲಿ ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯ ಕರ್ತವ್ಯದಿಂದ ಬಿಡುಗಡೆಗೊಳಿಸಿ ಶ್ರೀ ಸಚಿನ್.ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗ್ಗಹಳ್ಳಿ ಗ್ರಾಮ ಪಂಚಾಯತಿ ಇವರನ್ನು ಬಿದರಕೋಟೆ ಗ್ರಾಮ ಪಂಚಾಯತಿಗೆ ಹೆಚ್ಚುವರಿ ಪ್ರಭಾರದ ಮೇಲೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಲು ಆದೇಶಿಸಲಾಗಿರುತ್ತದೆ.

ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಗ್ರಾಅಪ:16:ಗ್ರಾಪಂಕಾ:2020 ದಿನಾಂಕ: 21-11-2020ರಲ್ಲಿ ಶ್ರೀ ಸಜ್ಜಣ್ಣ ಸಜ್ಜನ, ಗ್ರಾಮ ಪಂಚಾಯತಿ ಕಾರ್ಯದರ್ಶಿ(ಗ್ರೇಡ್-1), ಬಿದರಕೋಟೆ ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು ಇವರನ್ನು ಕಲಬುರಗಿ ಜಿಲ್ಲೆಗೆ ಅಂತರ್‌ಜಿಲ್ಲಾ ವರ್ಗಾವಣೆ ಮಾಡಿ ಆದೇಶಿಸಲಾಗಿದ್ದು, ಮಂಡ್ಯ ಜಿಲ್ಲಾ ಪಂಚಾಯಿತಿ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ: ಉಕಾ2:ಸಿ6:ಸಿಆರ್-42:2021-22 ದಿನಾಂಕ:27-11-2021ರಲ್ಲಿ ಸದರಿಯವರನ್ನು ಬಿದರಕೋಟೆ ಗ್ರಾಮ ಪಂಚಾಯಿತಿಯ ಗ್ರಾಮ ಪಂಚಾಯತಿ ಕಾರ್ಯದರ್ಶಿ(ಗ್ರೇಡ್-1) ಹುದ್ದೆಗೆ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿರುತ್ತದೆ.

ಪ್ರಸ್ತುತ ಖಾಲಿ ಇರುವ ಬಿದರಕೋಟೆ ಗ್ರಾಮ ಪಂಚಾಯತಿಯ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಹುದ್ದೆಗೆ ಶ್ರೀಮತಿ ಸಿ. ಸುಮಾವತಿ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1), ಕೊಪ್ಪ ಗ್ರಾಮ ಪಂಚಾಯತಿ ಇವರ ಹೆಚ್ಚುವರಿ ಪ್ರಭಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಬಿದರಕೋಟೆ ಗ್ರಾಮ ಪಂಚಾಯತಿಯ ಖಾಯಂ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ತುಮಕೂರು ಜಿಲ್ಲೆಗೆ ನಿಯೋಜನೆ ಮಾಡಿರುವುದರಿಂದ, ಸಾರ್ವಜನಿಕ ಮತ್ತು ಆಡಳಿತಾತ್ಮಕ ಕೆಲಸ ಕಾರ್ಯಗಳಿಗೆ ಅಡಚಣೆಯಾಗದಂತೆ ಬಿದರಕೋಟೆ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಹೆಚ್ಚುವರಿ ಪ್ರಭಾರ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.

ಹಾಗೂ ಅದೇ ರೀತಿ ಬಿದರಕೋಟೆ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಹುದ್ದೆಗೂ ಸಹ ಸಾರ್ವಜನಿಕ ಮತ್ತು ಆಡಳಿತಾತ್ಮಕ ಕೆಲಸ ಕಾರ್ಯಗಳಿಗೆ ಅಡಚಣೆಯಾಗದಂತೆ ತಾತ್ಕಾಲಿಕ ಪ್ರಭಾರ ವ್ಯವಸ್ಥೆಯನ್ನು ಮಾಡಲಾಗಿದ್ದು, ಮುಂದೆ ಮುಂಬಡ್ತಿ ನೀಡುವ ಸಮಯದಲ್ಲಿ ಖಾಲಿ ಇರುವ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

**ಸಂಖ್ಯೆ: ಗ್ರಾಅಪ 478 ಗ್ರಾಪಂಅ 2021**

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.